# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 229 (1676+1768)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಕೃಷಿ ಸಚಿವರು

ವಿಷಯ : ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ ಯೋಜನೆ ಅಡಿಯಲ್ಲಿ ರೈತರಿಗೆ ಬಿಡುಗಡೆಯಾದ ಮೊತ್ತ ಕುರಿತು

(ಅ) ರಾಯಚೂರು ಹಾಗೂ ಬೀದರ್ ಜಿಲ್ಲೆಗಳ ರೈತರುಗಳಿಗೆ ಕೇಂದ್ರ ಸರ್ಕಾರದಿಂದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ ಯೋಜನೆ ಅಡಿಯಲ್ಲಿ ರೈತರಿಗೆ ವರ್ಷಕ್ಕೆ ರೂ.6000/- ರಂತೆ ಹಾಗೂ ರಾಜ್ಯ ಸರ್ಕಾರದ ವತಿಯಿಂದ ಹೆಚ್ಚುವರಿಯಾಗಿ ರೂ.4000/- ಗಳನ್ನು ಕಂತುಗಳಲ್ಲಿ ನೀಡಲಾಗಿದೆಯೇ; ಹಾಗೂ ಇಲ್ಲಿಯವರೆಗೆ ಬಿಡುಗಡೆಯಾದ ಮೊತ್ತವೆಷ್ಟು;

(ಆ) ಸದರಿ ಯೋಜನೆ ಅಡಿಯಲ್ಲಿ ರಾಯಚೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಪ್ರಯೋಜನ ಪಡೆದಿರುವ ರೈತರೆಷ್ಟು;

(ಇ) ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಈ ಯೋಜನೆಗೆ ಬಿಡುಗಡೆಯಾಗಿರುವ ಹಣವೆಷ್ಟು ಮತ್ತು ಎಷ್ಟು ಜನ ರೈತರ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗಿದೆ; (ವಿವರ ಒದಗಿಸುವುದು)

(ಈ) ರಾಯಚೂರು ಜಿಲ್ಲೆ ವ್ಯಾಪ್ತಿಯ ರೈತರಿಗೆ ಬ್ಯಾಂಕ್ ಖಾತೆಗೆ ಹಣ ಜಮೆಯಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಕೈಗೊಂಡ ಕ್ರಮವೇನು;

(ಉ) ಸದರಿ ಯೋಜನೆಯ ಉದ್ದೇಶಗಳು ಹಾಗೂ ಮಾರ್ಗಸೂಚಿಗಳೇನು? (ವಿವರ ನೀಡುವುದು)